ಸ್ಪೋಕನ್ ಇಂಗ್ಲೀಷ ಕಾರ್ಯಗಾರ

ಹುಬ್ಬಳಿ : ಸ್ಥಳೀಯ ಕೆ.ಎಲ್.ಇ ಸಂಸ್ಥೆಯ ಶಿಕ್ಷಣ ಮಹಾವಿದ್ಯಾಲಯ ಹಾಗೂ ಸ್ನಾತಕೋತ್ತರ ಶಿಕ್ಷಣ ವಿಭಾಗ ವಿದ್ಯಾನಗರ ಹುಬ್ಬಳ್ಳಿಯಲ್ಲಿ ದಿನಾಂಕ 06.04.2022 ರಂದು ಸ್ಪೋಕನ್ ಇಂಗ್ಲೀಷ ಕುರಿತು ಒಂದು ದಿನದ ಕಾರ್ಯಗಾರವನ್ನು ಪ್ರಥಮ ಹಾಗೂ ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿಗಳಿಗಾಗಿ ಮಹಾವಿದ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿತ್ತು. ವಿಜಯಪುರದ F2 English Classes ನ ಸಂಯೋಜಕರಾದ ಶ್ರೀ ಐ.ಎಂ ಚೋಪದಾರ ಅವರು ನಡೆಸಿಕೊಟ್ಟರು. ಪ್ರಶಿಕ್ಷಣಾರ್ಥಿಗಳಿಗೆ ಸ್ಪೋಕನ್ ಇಂಗ್ಲೀಷದ ಕುರಿತು ವ್ಯಾಕರಣನ ಉದಾಹರಣೆಗಳೊಂದಿಗೆ ತಿಳಿಸಿದರು. ಆಸಕ್ತ ವಿದ್ಯಾರ್ಥಿಗಳು ಹೆಚ್ಚಿನ ಜ್ಞಾನರ್ಜನೆಗೆ ಹಾಗೂ ತರಬೇತಿಗಾಗಿ ತಾವು ನಡೆಸುತ್ತಿರುವ 15 ದಿನಗಳ ಕೋರ್ಸಿಗೆ ಸೇರಲು ಕರೆಕೊಟ್ಟರು. ಇದೇ ಸಂದರ್ಭದಲ್ಲಿ ಅಧ್ಯಕ್ಷತೆಯನ್ನು ವಹಿಸಿದ್ದ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ ಲಿಂಗರಾಜ ಸಿ ಮುಳ್ಳಳ್ಳಿ ಅವರು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡುತ್ತಾ ಇಂದಿನ ದಿನಗಳಲ್ಲಿ ಇಂಗ್ಲೀಷ ಭಾಷೆಯ ಪ್ರಾಮುಖ್ಯತೆಯ ಕುರಿತು ಪ್ರಶಿಕ್ಷಣಾರ್ಥಿಗಳಿಗೆ ಮನವರಿಕೆ ಮಾಡಿಕೊಟ್ಟರು. ಕಾರ್ಯಕ್ರಮದ ನಿರೂಪಣೆಯನ್ನು ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿಯಾದ ಪವಿತ್ರಾ ಅಕ್ಕಿ ನೆರವೇರಿಸಿದರು. ಕೊನೆಯದಾಗಿ ವಂದನಾರ್ಪಣೆ ಕಾರ್ಯಕ್ರಮವನ್ನು ದ್ವೀತಿಯ ವರ್ಷದ ಪ್ರಶಿಕ್ಷಣಾರ್ಥಿಯಾದ ಪದ್ಮಾ ಕಾಂಬಳೆ ನೆರವೇರಿಸಿದರು. ಕಾರ್ಯಕ್ರಮದಲ್ಲಿ ಎಲ್ಲಾ ಬೋಧಕ ಮತ್ತು ಬೋಧಕೇತರ ಸಿಬ್ಬಂಧಿ ವರ್ಗದವರು ಹಾಗೂ ಪ್ರಥಮ ಮತ್ತು ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿಗಳು ಹಾಜರಿದ್ದರು.